**ಕರ್ನಾಟಕ ಸರ್ಕಾರ**

**ಸಂಖ್ಯೆ:** ಡಿಟಿಇ 02 ಎಸ್‌ಸಿಹೆಚ್(1)2016-17

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560001.
ದಿನಾಂಕ: 20-06-2016.

**-:: ಸುತ್ತೋಲೆ ::-**

**ವಿಷಯ:-** ಭೂಸೇನಾ, ವಾಯುದಳ ಮತ್ತು ನೌಕಾದಳದಲ್ಲಿ ಸೇವೆ ಸಲ್ಲಿಸುತ್ತಿರುವ ರಕ್ಷಣಾ ದಳದ ಸಿಬ್ಬಂದಿಯವರ ಮಕ್ಕಳು/ಆಶ್ರಿತರಿಗೆ ಈಗಾಗಲೇ 2012-13 ರಿಂದ 2015-16ನೇ ಸಾಲಿನವರೆಗೆ ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸಿದ್ದು, ಇವರುಗಳ ಬ್ಯಾಂಕ್ ಖಾತೆ/ಐ.ಎಫ್.ಎಸ್.ಸಿ ಸಂಖ್ಯೆಯನ್ನು ಕಳುಹಿಸಿ ಕೊಡುವ ಬಗ್ಗೆ.

**ಉಲ್ಲೇಖ:-**
1) ಆರ್ಥಿಕ ಇಲಾಖೆಯ ಸರ್ಕಾರಿ ಆದೇಶ ಸಂಖ್ಯೆ: ಆಇ 47 ಟಿಎಆರ್ 2014, ದಿ: 22-12-2014.
2) ಆರ್ಥಿಕ ಇಲಾಖೆಯ ಸರ್ಕಾರಿ ಆದೇಶ ಸಂಖ್ಯೆ: ಆಇ 18 ಟಿಎಆರ್ 2015, ದಿ: 01-07-2015.
3) ಆರ್ಥಿಕ ಇಲಾಖೆಯ ಸರ್ಕಾರಿ ಆದೇಶ ಸಂಖ್ಯೆ: ಆಇ 53 ಟಿಎಆರ್ 2015, ದಿ: 15-02-2016.

**-00000000-**

ವಿಷಯಕ್ಕೆ ಸಂಬಂಧಿಸಿದಂತೆ, ಈಗಾಗಲೇ 2012-13ನೇ ಸಾಲಿನಿಂದ 2015-16ನೇ ಸಾಲಿನವರೆಗೆ ರಕ್ಷಣಾದಳದ ವಿದ್ಯಾರ್ಥಿವೇತನಕ್ಕಾಗಿ ಅರ್ಜಿಯನ್ನು ಸಲ್ಲಿಸಿದ್ದು, ಈ ಅರ್ಜಿಗಳನ್ನು ಪರಿಶೀಲಿಸಿ, ಮಂಜೂರಾತಿ ನೀಡಿ ಹಣವನ್ನು ನೇರವಾಗಿ ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗಳಿಗೆ ಜಮಾ ಮಾಡಬೇಕಾಗಿರುವುದರಿಂದ ವಿದ್ಯಾರ್ಥಿಗಳ ಬ್ಯಾಂಕ್(ಎಸ್.ಬಿ.)ಖಾತೆ, ಐ.ಎಫ್.ಎಸ್.ಸಿ ಸಂಖ್ಯೆ ಮತ್ತು ವಿದ್ಯಾರ್ಥಿಯು ಹಾಲಿ ಖಾತೆಗೆ ಹಣ ಹಾಕಿ ಮತ್ತು ತೆಗೆದಿರುವ ವ್ಯವಹಾರದ ಪೂರ್ಣ ವಿವರವನ್ನು ವಿದ್ಯಾರ್ಥಿಗಳಿಂದ ಪಡೆದು ಸ್ವೀಕರಿಸಿ, ಮತ್ತೊಮ್ಮೆ ಪರಿಶೀಲಿಸಿ ಈ ಕಛೇರಿಗೆ ಒಂದು (01) ವಾರದೊಳಗಾಗಿ ತಲುಪುವಂತೆ ಕ್ರಮ ಜರುಗಿಸಬೇಕಾಗಿ ಈ ಮೂಲಕ ತಿಳಿಯಪಡಿಸಿದೆ.

ಇದರೊಂದಿಗೆ ಸಂಸ್ಥೆಯು ಬ್ಯಾಂಕಿನಲ್ಲಿ ಖಾತೆಯನ್ನು ತೆರೆದಿದ್ದು, ಇದು ಪ್ರಾಂಶುಪಾಲರ ಹೆಸರಿನಲ್ಲಿದ್ದು, ಆ ಖಾತೆಯ ಸಂಖ್ಯೆ, ಐ.ಎಫ್.ಎಸ್.ಸಿ ಸಂಖ್ಯೆಯನ್ನು ಸಹ ಕಳುಹಿಸಿ ಕೊಡಲು ಈ ಮೂಲಕ ಸೂಚಿಸಿದೆ.

ತಮ್ಮ ವಿಶ್ವಾಸಿ,

ಸಹಾಯಕ ನಿರ್ದೇಶಕರು(ಎಂ.ಪಿ.ಸಿ)

**ಇವರಿಗೆ,**

1. ಪ್ರಾಂಶುಪಾಲರಿಗೆ – ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ & ಅನುದಾನರಹಿತ ಇಂಜಿನಿಯರಿಂಗ್ ಕಾಲೇಜುಗಳು – **ಮಾಹಿತಿ ಮತ್ತು ಮುಂದಿನ ಕ್ರಮಕ್ಕಾಗಿ.**
2. **ಸಂಯೋಜನಾಧಿಕಾರಿಯವರು,** ಇ-ಆಡಳಿತ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.